# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 181 |
| ಸದಸ್ಯರ ಹೆಸರು | ಶ್ರೀ ಪ್ರಕಾಶ್ ಕೆ. ರಾಥೋಡ್<br>(ನಾಮ ನಿರ್ದೇಶನ ಹೊಂದಿದವರು) |
| ಉತ್ತರಿಸಬೇಕಾದ ದಿನಾಂಕ | 14.12.2021 |
| ಉತ್ತರಿಸುವ ಸಚಿವರು | ಗಣಿ ಮತ್ತು ಭೂವಿಜ್ಞಾನ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಮತ್ತು ವಿಕಲಚೇತನರ, ಹಿರಿಯ ನಾಗರಿಕರ ಸಬಲೀಕರಣ ಸಚಿವರು. |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಹೊಸದಾಗಿ ಮರಳು ನೀತಿಯನ್ನು ರೂಪಿಸಲಾಗಿದೆಯೇ; (ಮರಳು ನೀತಿಯ ವಿವರ ನೀಡುವುದು) | ದಿನಾಂಕ 05.05.2020 ರಂದು ಹೊಸ ಮರಳು ನೀತಿ, 2020 ನ್ನು ಜಾರಿಗೊಳಿಸಲಾಗಿರುತ್ತದೆ. ವಿವರಗಳನ್ನು **ಅನುಬಂಧ**ದಲ್ಲಿ ನೀಡಲಾಗಿದೆ. |
| ಆ) | ಹೊಸ ಮರಳು ನೀತಿಯಿಂದ ಮನೆ ಕಟ್ಟಲು ಮರಳು ಒದಗಿಸಲಾಗುವುದೇ; ಈ ಬಗ್ಗೆ, ಸರ್ಕಾರ ಕೈಗೊಂಡಿರುವ ಕ್ರಮಗಳೇನು; | • ಹೊಸ ಮರಳು ನೀತಿ, 2020 ರಂತೆ, I, II & III ನೇ ಶ್ರೇಣಿಯ ಹಳ್ಳ / ತೊರೆಗಳಲ್ಲಿ ಹಾಗೂ ಕೆರೆಗಳಲ್ಲಿ ಲಭ್ಯವಿರುವ ಮರಳನ್ನು ಗ್ರಾಮ ಪಂಚಾಯಿತಿಯಿಂದ ವಿಲೇವಾರಿ ಮಾಡಲು ಅವಕಾಶ ಕಲ್ಪಿಸಲಾಗಿದ್ದು, ಸದರಿ ಮರಳನ್ನು ತಾಲ್ಲೂಕಿನ ಸ್ಥಳೀಯ ಯಾವುದೇ ಸಾರ್ವಜನಿಕ, ಸರ್ಕಾರಿ, ಸರ್ಕಾರಿ ಪ್ರಾಯೋಜಿತ ಕಡಿಮೆ ವರಮಾನದ ವಸತಿ ಯೋಜನೆ ಮನೆಗಳಿಗೆ ಮತ್ತು ಸಮುದಾಯತ್ವ ನಿರ್ಮಾಣ ಕಾಮಗಾರಿಗಳಿಗೆ ಬಳಸಿಕೊಳ್ಳಲು ಅವಕಾಶ ಕಲ್ಪಿಸಲಾಗಿರುತ್ತದೆ.<br>• ಸದರಿ ಗ್ರಾಮ ಪಂಚಾಯಿತಿಯಿಂದ ವಿಲೇವಾರಿ ಮಾಡುವ ಪ್ರತಿ ಮೆಟ್ರಿಕ್ ಟನ್ ಮರಳಿಗೆ ರೂ. 300/-ಗಳನ್ನು ನಿಗದಿ ಪಡಿಸಲಾಗಿರುತ್ತದೆ.<br>• IV V & VI ನೇ ಶ್ರೇಣಿಯ ಹೊಳೆ / ನದಿಗಳಲ್ಲಿ ಮತ್ತು ಅಣೆಕಟ್ಟು / ಜಲಾಶಯ / ಬ್ಯಾರೇಜ್ ಹಾಗೂ ಅಣೆಕಟ್ಟಿನ ಹಿನ್ನೀರಿನ ಪ್ರದೇಶದಲ್ಲಿ ಮರಳು ತೆಗೆದು ಮಾರಾಟ ಮಾಡಲು ಮೆ॥ ಕರ್ನಾಟಕ ಸ್ಟೇಟ್ ಮಿನರಲ್ಸ್ ಕಾರ್ಪೋರೇಷನ್ ಲಿಮಿಟೆಡ್ (KSMCL) ಮತ್ತು ಮೆ॥ ಹಟ್ಟಿ ಚಿನ್ನದ ಗಣಿ ಕಂಪನಿ ನಿಯಮಿತ (HGML) ಇವರಿಗೆ ವಹಿಸಲಾಗಿದೆ. |

| | | |
|---|---|---|
| | | • ಸದರಿ ಸಂಸ್ಥೆಗಳಿಂದ ಮರಳನ್ನು ಆನ್ ಲೈನ್ ಬುಕಿಂಗ್ ಮೂಲಕ ಯಾವುದೇ ಸಾರ್ವಜನಿಕ ಹಾಗೂ ಸರ್ಕಾರಿ ನಿರ್ಮಾಣ ಕಾಮಗಾರಿಗಳಿಗೆ ಬಳಸಿಕೊಳ್ಳಲು ಅವಕಾಶ ಕಲ್ಪಿಸಲಾಗಿದೆ.<br>• ಸದರಿ ಸಂಸ್ಥೆಗಳಿಂದ ವಿಲೇವಾರಿ ಮಾಡುವ ಪ್ರತಿ ಮೆಟ್ರಿಕ್ ಟನ್ ಮರಳಿಗೆ ರೂ. 700/- ಗಳನ್ನು ವಿಲೇಪಡಿಸಲಾಗಿರುತ್ತದೆ.<br><br>ಮೇಲ್ಕಂಡ ಸಂಸ್ಥೆಗಳಿಂದ ಮರಳು ಪಡೆಯಲು ಅನುಸರಿಸಬೇಕಾದ ಬೇಕಾದ ಕ್ರಮಗಳ ಕುರಿತು ದಿನಾಂಕ 05.05.2020 ರಂದು ಮಾರ್ಗಸೂಚಿಗಳನ್ನು ಹೊರಡಿಸಲಾಗಿರುತ್ತದೆ.<br>ವಿವರಗಳನ್ನು **ಅನುಬಂಧ**ದಲ್ಲಿ ನೀಡಲಾಗಿದೆ. |
| ಇ) | ಸರ್ಕಾರವು ಬಡಜನರಿಗೆ ಮನೆ ಕಟ್ಟಲು ಉಚಿತವಾಗಿ ಮರಳು ನೀಡಲಾಗುವುದೇ? (ವಿವರ ನೀಡುವುದು) | ಪ್ರಸ್ತುತ, ಅಂತಹ ಪ್ರಸ್ತಾವನೆ ಸರ್ಕಾರದ ಮುಂದಿರುವುದಿಲ್ಲ. |

ಸಂಖ್ಯೆ ಸಿಐ 599 ಎಂಎಂಎನ್ 2021

**(ಆಚಾರ್ ಹಾಲಪ್ಪ ಬಸಪ್ಪ)**
ಗಣಿ ಮತ್ತು ಭೂವಿಜ್ಞಾನ ಹಾಗೂ
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಮತ್ತು
ವಿಕಲಚೇತನರ, ಹಿರಿಯ ನಾಗರಿಕರ
ಸಬಲೀಕರಣ ಸಚಿವರು.